ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 21/09/2019

## ಮಹಾರಾಷ್ಟ್ರ ಜತೆಯಲ್ಲಿಯೇ 17 ಕ್ಷೇತ್ರಗಳಿಗೂ ಮತದಾನ ಎಂಬ ಆತಂಕ

# ಅನರ್ಹರಿಗೆ ಚುನಾವಣೆ ಭೀತಿ

■ **ವಿಕ ಸುದ್ದಿಲೋಕ** ಬೆಂಗಳೂರು 21/9/19

ರಾಜ್ಯದಲ್ಲಿ ಖಾಲಿ ಇರುವ ವಿಧಾನಸಭಾ ಕ್ಷೇತ್ರಗಳ ಬಗ್ಗೆ ವಿಧಾನಸಭೆ ಶಾಸನ ರಚನಾ ಶಾಖೆಯಿಂದ ಚುನಾವಣಾ ಆಯೋಗಕ್ಕೆ ವರದಿ ನೀಡಿರುವುದು ಅನರ್ಹ ಶಾಸಕರ ಆತಂಕಕ್ಕೆ ಕಾರಣವಾಗಿದೆ. ಇದರ ಮಧ್ಯೆಯೇ ಮಹಾರಾಷ್ಟ್ರ ವಿಧಾನಸಭಾ ಜತೆಗೆ ಖಾಲಿ ಇರುವ 17 ಕ್ಷೇತ್ರಗಳಿಗೆ ಉಪಚುನಾವಣೆ ನಡೆಯುವ ಸಾಧ್ಯತೆಯೂ ದಟ್ಟವಾಗಿದೆ.

ಅನರ್ಹತೆ ಪ್ರಕರಣದ ವಿಚಾರಣೆಯಿಂದ ನ್ಯಾ. ಮೋಹನಶಾಂತನ್‌ಗೌಡ ಹಿಂದೆ ಸರಿದಿರುವ ಹಿನ್ನೆಲೆಯಲ್ಲಿ ಇದೇ 23ರಂದು ಪ್ರಕರಣದ ವಿಚಾರಣೆ ಮುಂದೂಡಲಾಗಿದೆ. ಆದರೆ ಅದೇ ದಿನ ಅನರ್ಹತೆ ವಿಚಾರ ಇತ್ಯರ್ಥವಾಗುವ ಸಾಧ್ಯತೆ ಕಡಿಮೆ ಇದೆ. ಹೀಗಾಗಿ ಅನರ್ಹ ಶಾಸಕರು ತಾಳ್ಮೆ ಕಳೆದುಕೊಳ್ಳುವಂತಾಗಿದೆ. ಇದೆಲ್ಲದರ ಮಧ್ಯೆಯೇ ಖಾಲಿ ಇರುವ ವಿಧಾನಸಭಾ ಕ್ಷೇತ್ರಗಳ ಪಟ್ಟಿಯನ್ನು ಚುನಾವಣಾ ಆಯೋಗಕ್ಕೆ ಕಳುಹಿಸಲಾಗಿದೆ.

ನಿಯಮ ಪ್ರಕಾರ ಯಾವುದೇ ವಿಧಾನಸಭಾ ಕ್ಷೇತ್ರ ತೆರವಾದ 6 ತಿಂಗಳೊಳಗಾಗಿ ಚುನಾವಣೆ ನಡೆಸಬೇಕು. ಆದರೆ ಅನರ್ಹ ಶಾಸಕರ ವಿಚಾರಣೆಯನ್ನು ಈ ಅವಧಿಯಲ್ಲಿ ಇತ್ಯರ್ಥಗೊಳಿಸಲು ಸುಪ್ರೀಂ ಕೋರ್ಟ್ ನಿರಾಕರಿಸಿದರೆ ಸಂಕಷ್ಟ ಎದುರಾಗಲಿದೆ. ಇಂಥ ಸ್ಥಿತಿ ನಿರ್ಮಾಣವಾಗುವ ಸಾಧ್ಯತೆಯನ್ನು ಊಹಿಸಿರುವ ಬಿಜೆಪಿ 17 ಕ್ಷೇತ್ರಗಳಲ್ಲಿ ಚುನಾವಣಾ ಸಿದ್ಧತೆ ನಡೆಸಿದೆ. ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ನೇತೃತ್ವದಲ್ಲಿ ಗುರುವಾರ ಈ ಸಂಬಂಧ ಮಹತ್ವದ ಸಭೆ ನಡೆದಿದ್ದು, ಗೆಲುವಿನ ಕಾರ್ಯತಂತ್ರದ ಬಗ್ಗೆ ಚರ್ಚೆ ನಡೆಸಲಾಗಿದೆ.

ಆದರೆ ಈ ಸಭೆಗೆ ಅನರ್ಹ ಶಾಸಕರಿಗಾಗಲಿ, ಅವರ ಬೆಂಬಲಿಗರಿಗಾಗಲಿ ಆಹ್ವಾನ ನೀಡಿರಲಿಲ್ಲ ಎಂಬುದು ಕುತೂಹಲಕಾರಿ ಸಂಗತಿ. ಇದಕ್ಕೆ ಪೂರಕವಾಗಿ ರಾಜರಾಜೇಶ್ವರಿನಗರ ಕ್ಷೇತ್ರದಿಂದ ಸಂಘ-ಪರಿವಾರಕ್ಕೆ ನಿಷ್ಠರಾದವರನ್ನೇ ಕಣಕ್ಕೆ ಇಳಿಸಬೇಕೆಂಬ ಬಗ್ಗೆಯೂ ಪಕ್ಷದ ಆಂತರಿಕ ವಲಯದಲ್ಲಿ ಚರ್ಚೆ ನಡೆಯುತ್ತಿದೆ ಎಂದು ತಿಳಿದು ಬಂದಿದೆ. ಹೀಗಾಗಿ ಅನರ್ಹ ಶಾಸಕ ಮುನಿರತ್ನ ನಾಯ್ಡು ಬಣ ಬೇಸರಗೊಂಡಿದೆ.

**ನಡೆ ಏನು ?:** ಬಿಜೆಪಿ ಮೂಲಗಳ ಪ್ರಕಾರ ಅನರ್ಹತೆ ವಿಚಾರ ಇತ್ಯರ್ಥಕ್ಕೆ ಮುನ್ನ ಉಪ ಚುನಾವಣೆ ನಡೆದರೆ ಅನರ್ಹ 17 ಮಂದಿ ಶಾಸಕರು - ಸ್ಪರ್ಧೆ ಮಾಡುವುದಕ್ಕೆ ಸಾಧ್ಯವಾಗುವುದಿಲ್ಲ. ಸ್ಪೀಕರ್ ಆದೇಶದಲ್ಲಿ ಹಾಲಿ ವಿಧಾನಸಭೆ ಮುಕ್ತಾಯದವರೆಗೆ ಅನರ್ಹತೆ ಇದೆ. ಹೀಗಾಗಿ ಈ ಬಗ್ಗೆ ಸುಪ್ರೀಂ ಕೋರ್ಟ್ ಸ್ಪಷ್ಟತೆ ನೀಡುವವರೆಗೂ ಕಾಯುವುದು ಅನಿವಾರ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ತಮ್ಮ ಕುಟುಂಬ ವರ್ಗದವರನ್ನು ಕಣಕ್ಕಿಳಿಸುವ ಚಿಂತನೆಯನ್ನು ಅನರ್ಹ ಶಾಸಕರು ಹೊಂದಿದ್ದಾರೆ.



**ಅನರ್ಹ ಶಾಸಕರ ಕ್ಷೇತ್ರದಲ್ಲಿ ಚುನಾವಣೆ ನಡೆಸಿ ಎಂದು ಆಯೋಗಕ್ಕೆ ನಾವು ಮನವಿ ಮಾಡಿಲ್ಲ. ಆ ಅಧಿಕಾರ ವ್ಯಾಪ್ತಿ ನಮಗಿಲ್ಲ. ವಿಧಾನಸಭೆಯಲ್ಲಿ ಪಕ್ಷವಾರು ಹಾಗೂ ಕ್ಷೇತ್ರವಾರು ಖಾಲಿ ಇರುವ ಸ್ಥಾನಗಳ ಬಗ್ಗೆ ಪ್ರತಿ ತಿಂಗಳು ಚುನಾವಣಾ ಆಯೋಗಕ್ಕೆ ಪ್ರಮಾಣ ಪತ್ರ ನೀಡುವ ಪದ್ಧತಿ ಇದೆ. ಆ ಪ್ರಕಾರವಾಗಿ ಮಾಹಿತಿ ಕಳುಹಿಸಲಾಗಿದೆ.**



-**ವಿಶಾಲಾಕ್ಷಿ** ವಿಧಾನಸಭೆ ಕಾರ್ಯದರ್ಶಿ

3